Joint Director Building Licence Cell (North)
N.R. Square
Bengaluru 560 002
No. 73
Date. 07-02-2020
BBMP

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ಕಟ್ಟಡ ಪರವಾನಗಿ ಕೋಶ– ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002

ಸಂಖ್ಯೆ: BBMP/ Addl.Dir/JD NORTH/ LP/0109/2015-16

ದಿನಾಂಕ: 06–02–2020

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಖಾತಾ ಸಂಖ್ಯೆ. 1549/637/1/605/762, ಜುನ್ನಸಂದ್ರ ಗ್ರಾಮ, ವರ್ತೂರು ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ಸಂಖ್ಯೆ: 150, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD NORTH/ LP/0109/2015-16 ದಿನಾಂಕ: 19–09–2019.
2) ತಮ್ಮ ಮನವಿ ಪತ್ರ ದಿನಾಂಕ: 04–01–2020.

* * * * * * *

ಆ ಆಸ್ತಿ ಖಾತಾ ಸಂಖ್ಯೆ. 1549/637/1/605/762, ಜುನ್ನಸಂದ್ರ ಗ್ರಾಮ, ವರ್ತೂರು ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ಸಂಖ್ಯೆ: 150, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ತಳ + ನೆಲ + ಮೇಲಿನ 4 ಅಂತಸ್ತುಗಳ 54 ಘಟಕಗಳ ವಸತಿ ಸಮುಚ್ಚಯ ಕಟ್ಟಡ ನಿರ್ಮಿಸಲು ಈ ಕಛೇರಿಯಿಂದ ಸಂಖ್ಯೆ: BBMP/Addl.Dir/JDNorth/LP/0109/2015-16 ರಂತೆ ದಿನಾಂಕ: 19–09–2019 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಪ್ರಸ್ತುತ ಸದರಿ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಸದರಿ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ನಡುಜಾಗಗಳನ್ನು ಬಿಟ್ಟು ಕಟ್ಟಡದ ನಿರ್ಮಾಣ ಮಾಡುತ್ತಿರುವುದನ್ನು ಗಮನಿಸಲಾಗಿರುತ್ತದೆ.

ಅಪರ ನಿರ್ದೇಶಕರು (ಕಟ್ಟಡ ಪರವಾನಗಿ ಕೋಶ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 31–01–2020 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಸಂಬಂಧ ಶುಲ್ಕ ರೂ. 54,000/– ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/000574, ದಿನಾಂಕ: 06–02–2020 ರಂದು ಸಂದಾಯ ಮಾಡಿರುವುದರಿಂದ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1) ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ–ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಯಾವುದೇ ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3) ನಕ್ಷೆ ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.
4) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ–ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
5) ನಿವೇಶನದ ಖಾತಾ ವಿಭಜನೆ, ದಾಖಲಾತಿಗಳನ್ನು / ಸ್ವತ್ತಿನ ಹಕ್ಕನ್ನು ಬದಲಾಯಿಸಿದಲ್ಲಿ ಮತ್ತು ಯಾವುದೇ ರೀತಿ ದಾಖಲಾತಿಗಳನ್ನು ಅಥವಾ ವಾಸ್ತವಾಂಶ ಮರೆಮಾಚಿದಲ್ಲಿ ಅರ್ಜಿದಾರರು ನೇರ ಹೊಣೆಯಾಗಿರುತ್ತಾರೆ ಮತ್ತು ನೀಡಲಾದ ಕಟ್ಟಡ ನಕ್ಷೆ ಮಂಜೂರಾತಿಯು ತನ್ನಿಂದತಾನೇ ರದ್ದುಗೊಳ್ಳುತ್ತದೆ.

Scanned by CamScanner

6) ವಿವಿಧ ಇಲಾಖೆಗಳಿಂದ ಪಡೆದಿರುವ ನಿರಾಕ್ಷೇಪಣಾ ಪತ್ರಗಳಲ್ಲಿ ವಿಧಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು

7) ಅರ್ಜಿದಾರರು/ಮಾಲೀಕರು/ಡೆವಲಪರ್‌ಗಳು ಕಟ್ಟಡ ನಿರ್ಮಾಣ ಮತ್ತು ಕಟ್ಟಡ ತೆರವಿನ ತ್ಯಾಜ್ಯದ ನಿರ್ವಹಣೆ ಮತ್ತು ವಿಲೇವಾರಿಯನ್ನು ಮಾಡಲು ಘನತ್ಯಾಜ್ಯ ನಿರ್ವಹಣೆ (ಎಸ್.ಡಬ್ಲ್ಯೂ.ಎಂ) ಉಪನಿಯಮ 2016 ಕ್ಕೆ ಬದ್ಧವಾಗಿರತಕ್ಕದ್ದು.

8) ಅರ್ಜಿದಾರರು/ಮಾಲೀಕರು/ಡೆವಲಪರ್‌ಗಳು ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಪಾಯಿಂಟ್‌ಗಳನ್ನು ಅಳವಡಿಸಲು ಅಗತ್ಯ ಕ್ರಮವಹಿಸುವುದು.

9) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಸಂಸ್ಕರಿಸಿದ (Treated Water Utilisation for Construction) ನೀರನ್ನು ಕಟ್ಟಡ ನಿರ್ಮಾಣ ಕಾರ್ಯಕ್ಕೆ ಕಡ್ಡಾಯವಾಗಿ ಬಳಸಿಕೊಳ್ಳುವುದು.

10) ಅರ್ಜಿದಾರರು/ಮಾಲೀಕರು/ಡೆವಲಪರ್‌ಗಳು ಪ್ರತಿ 240.00 ಚ.ಮೀ ಅನುಪಾತ ವಿಸ್ತೀರ್ಣಕ್ಕೆ ಒಂದರಂತೆ ಗಿಡವನ್ನು ನೆಡುವುದು.

Munjes. B 07/02/2020

ಜಂಟಿ ನಿರ್ದೇಶಕರು (ಕಟ್ಟಡ ಪರವಾನಗಿ ಕೋಶ – ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

6/2/2020 6/02 6/2

ಗೆ,

ಮೆ॥ ಬೆಂಗಳೂರು ಹೋಮ್ಸ್ ಡೆವಲಪರ್ಸ್ ಅನ್ನು ಪ್ರತಿನಿಧಿಸುವ ಪಾಲುದಾರರಾದ
ಶ್ರೀ.ವಿಸ್ತಾ ಶ್ರೀನಿವಾಸನ್ ಎಸ್.ನಾಗೇಶ್ವರ ರಾವ್ ಜಿ.ಪಿ.ಎ.ದಾರರು,
ಶ್ರೀ.ವೆಟುಕರಿ ಸಿ.ಹೆಚ್.ವಿ.ಎಲ್ ಕೇಸವರಾಜ್ ಮತ್ತು ಇತರರು ಹಾಗೂ
# 15, 2ನೇ ಅಡ್ಡರಸ್ತೆ, ಅಣ್ಣಯ್ಯ ರೆಡ್ಡಿ ಬಿಲ್ಡಿಂಗ್,
ಡಿಆರ್‌ಡಿಓ ಫೇಸ್ –2, ಶನೇಶ್ವರ ಟೆಂಪಲ್ ಹತ್ತಿರ,
ಕಗ್ಗದಾಸಪುರ, ಸಿ.ವಿ.ರಾಮನ್‌ನಗರ,
ಬೆಂಗಳೂರು.

Scanned by CamScanner